# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ: | 610 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ / ಶ್ರೀಮತಿ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11-12-2023 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರಮ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಎಷ್ಟು ಜಿಲ್ಲಾ ಮತ್ತು ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಇಂಟೆನ್ಸಿವ್ ಕೇರ್ ಯೂನಿಟ್ (ಐ.ಸಿ.ಯು) ಮತ್ತು ವೆಂಟಿಲೇಟರ್ ಸೌಲಭ್ಯಗಳನ್ನು ತುರ್ತು ಸಂದರ್ಭದ ಸಮಯದಲ್ಲಿ ಅಗತ್ಯವಿರುವ ರೋಗಿಗಳ ಚಿಕಿತ್ಸೆಗಾಗಿ ಒದಗಿಸಲಾಗಿದೆ; | ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ 19 ಜಿಲ್ಲಾ ಆಸ್ಪತ್ರೆ ಮತ್ತು 146 ತಾಲ್ಲೂಕು ಆಸ್ಪತ್ರೆಗಳಲ್ಲಿ ಐ.ಸಿ.ಯು ಮತ್ತು ವೆಂಟಿಲೇಟರ್ ಸೌಲಭ್ಯಗಳನ್ನು ತುರ್ತು ಸಂದರ್ಭದ ಸಮಯದಲ್ಲಿ ಅಗತ್ಯವಿರುವ ರೋಗಿಗಳ ಚಿಕಿತ್ಸೆಗಾಗಿ ಒದಗಿಸಲಾಗಿದೆ. |
| ಆ) | ಹೊಸದಾಗಿ ಇಂಟೆನ್ಸಿವ್ ಕೇರ್ ಯೂನಿಟ್ (ಐ.ಸಿ.ಯು) ಮತ್ತು ವೆಂಟಿಲೇಟರ್ ಸೌಲಭ್ಯಗಳನ್ನು ಒದಗಿಸಿರುವ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ತುರ್ತು ಸಂದರ್ಭ ಸಮಯದಲ್ಲಿ ರೋಗಿಗಳಿಗೆ ಅಗತ್ಯವಿರುವ ಚಿಕಿತ್ಸೆಯನ್ನು ನೀಡಲು ನುರಿತ ವೈದ್ಯರು, ಶುಶ್ರೂಷಕರು ಮತ್ತು ಸಹಾಯಕ ಸಿಬ್ಬಂದಿಗಳ ಲಭ್ಯತೆಯಿದೆಯೇ; ಅಗತ್ಯ ವೈದ್ಯರು, ಶುಶ್ರೂಷಕರು ಮತ್ತು ಸಹಾಯಕ ಸಿಬ್ಬಂದಿಗಳ ಲಭ್ಯತೆಯಿಲ್ಲದ ಸಂದರ್ಭದಲ್ಲಿ ರೋಗಿಗಳಿಗೆ ತುರ್ತು ಸಮಯದಲ್ಲಿ ಸೂಕ್ತವಾದ ಚಿಕಿತ್ಸೆಯನ್ನು ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಪ್ರತಿ ಐ.ಸಿ.ಯು ಘಟಕಗಳಲ್ಲಿ ಕಾರ್ಯನಿರ್ವಹಿಸಲು 3 M.B.B.S ವೈದ್ಯರ ಹುದ್ದೆ, 6 ಶುಶ್ರೂಷಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. 6ಜನ ಶುಶ್ರೂಷಕರು ಈಗಾಗಲೇ ಕಾರ್ಯ ನಿರ್ವಹಿಸುತ್ತಿದ್ದಾರೆ. ಖಾಲಿ ಇರುವ M.B.B.S ವೈದ್ಯರ ಹುದ್ದೆಗಳಿಗೆ Rural Service ನಡಿ ಬರುವ M.B.B.S ವೈದ್ಯರಿಂದ ಆದ್ಯತೆ ಮೇಲೆ ಭರ್ತಿಮಾಡಲು ಕ್ರಮಕೈಗೊಳ್ಳಲಾಗುತ್ತಿದೆ.<br><br>ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ General Physician ಮತ್ತು anaesthetist ರವರುಗಳನ್ನು ಐ.ಸಿ.ಯು. ಗಳ ಮೇಲ್ವಿಚಾರಣೆ ಮತ್ತು ತುರ್ತು ಸಮಯದಲ್ಲಿ ಕಾರ್ಯನಿರ್ವಹಿಸಲು ಕ್ರಮವಹಿಸಲಾಗಿದೆ. |
| ಇ) | ರಾಜ್ಯದಲ್ಲಿ ತುರ್ತು ಸಂದರ್ಭಗಳಲ್ಲಿ ಮತ್ತು ಅಪಘಾತಗೊಳಗೊಂಡ ರೋಗಿಗಳನ್ನುಆಸ್ಪತ್ರೆಗೆ ಸೇರಿಸಲು ಇರುವ ಆಂಬುಲೆನ್ಸ್ ವಾಹನಗಳು ಮತ್ತು ಅದರ ಚಾಲಕರೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಒಟ್ಟು 895 ಆಂಬ್ಯುಲೆನ್ಸ್ ವಾಹನಗಳು ಚಾಲ್ತಿಯಲ್ಲಿರುತ್ತವೆ. ಹಾಗೂ 1224 ವಾಹನ ಚಾಲಕರು (ಖಾಯಂ ಮತ್ತು ಹೊರಗುತ್ತಿಗೆ ಚಾಲಕರು) ಇರುತ್ತಾರೆ. ಜಿಲ್ಲಾವಾರು ವಿವರ ಅನುಬಂಧ -1 ರಲ್ಲಿ ಲಗತ್ತಿಸಿದೆ. |
| ಈ) | ಕಾರ್ಯಾಚರಣೆಯಲ್ಲಿರುವ ಎಲ್ಲಾ ಆಂಬ್ಯುಲೆನ್ಸ್‌ಗಳು ಸುಸ್ಥಿತಿಯಲ್ಲಿದೆಯೇ; ದುರಸ್ಥಿಗೊಳಪಟ್ಟಿರುವ ಆಂಬ್ಯುಲೆನ್ಸ್ ಗಳನ್ನು ಶೀಘ್ರವಾಗಿ ದುರಸ್ಥಿಗೊಳಿಸಿ ಸಂಚಾರ ಯೋಗ್ಯಗೊಳಿಸಲು ಕೈಗೊಳ್ಳಲಾಗುತ್ತಿರುವ ಕ್ರಮಗಳೇನು? | ಕಾರ್ಯಾಚರಣೆಯಲ್ಲಿರುವ ಆಂಬ್ಯುಲೆನ್ಸ್‌ಗಳು ಸುಸ್ಥಿತಿಯಲ್ಲಿದ್ದು, ದುರಸ್ತಿಗೆ ಬಂದಲ್ಲಿ ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ನಿಯಮಾನುಸಾರ ದುರಸ್ತಿ ಕ್ರಮ ಕೈಗೊಳ್ಳಲಾಗುತ್ತದೆ. |

**ಸಂಖ್ಯೆ: ಆಕುಕ 244 ಪಿಐಎಂ 2023**

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

Scanned with OKEN Scanner